ಕರ್ನಾಟಕ ಸರ್ಕಾರ

ಸಂ: ಸಿಟಿಇ 04 ಡಿವಿಪಿ 2021

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560001,
ದಿನಾಂಕ: 05.07.2021

**ಸುತ್ತೋಲೆ**

ವಿಷಯ: 2021-22ನೇ ಸಾಲಿಗೆ ನವದೆಹಲಿಯ ಎಐಸಿಟಿಇ ಮಾನ್ಯತೆ ಪಡೆದ ರಾಜ್ಯದಲ್ಲಿ ಹಾಲಿ ಇರುವ ಎಲ್ಲಾ ಸರ್ಕಾರಿ, ಅನುದಾನಿತ, ಖಾಸಗಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಿಗೆ ರಾಜ್ಯ ಸರ್ಕಾರದ ಮಾನ್ಯತೆ ಪಡೆಯುವ ಬಗ್ಗೆ.

ಉಲ್ಲೇಖ: 2021-22ನೇ ಸಾಲಿಗೆ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಿಗೆ ಅನುಮೋದನೆ ಮಾಹಿತಿಯನ್ನು ಸಲ್ಲಿಸುವ ಕುರಿತು.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನವದೆಹಲಿಯ ಎಐಸಿಟಿಇಯ ಮಾರ್ಗಸೂಚಿಗಳನ್ವಯ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ, ಖಾಸಗಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಿಂದ 2021-22ನೇ ಸಾಲಿಗೆ ನವದೆಹಲಿಯ ಎಐಸಿಟಿಇ ಮಾನ್ಯತೆ ವಿಸ್ತರಣೆಯನ್ನು ಪಡೆಯಲು ಆನ್‌ಲೈನ್ ಅರ್ಜಿಯನ್ನು ಸಲ್ಲಿಸಿರುವುದು ಸರಿಯಷ್ಟೆ. ಸದರಿ ಪಾಲಿಟೆಕ್ನಿಕ್‌ಗಳಿಗೆ ಎಐಸಿಟಿಯ ವೆಬ್‌ಪೋರ್ಟಲ್‌ನಲ್ಲಿ ಅನುಮೋದನೆಯನ್ನು ವಿಸ್ತರಿಸಿ ಆದೇಶವನ್ನು (AICTE's Extension of Approval Letter EOA for 2021-22) ನೀಡುತ್ತಿರುವುದಾಗಿ ತಿಳಿದುಬಂದಿರುತ್ತದೆ. ಸದರಿ ಆದೇಶವನ್ನು ಡೌನ್‌ಲೋಡ್ ಮಾಡಿ 05 ಪ್ರತಿಗಳನ್ನು ಹಾಗೂ ಸಾಫ್ಟ್‌ಕಾಪಿಯನ್ನು ಈ ಕೆಳಕಂಡ ಇ-ಮೇಲ್ ವಿಳಾಸಕ್ಕೆ ಕಳುಹಿಸಲು ಮತ್ತು ಇದರ ಜೊತೆಗೆ AICTE's Extension of Approval Letter EOA for 2020-21 ಒಂದು ಪ್ರತಿಯನ್ನೂ ಸಹ ಕೂಡಲೇ ನಿರ್ದೇಶನಾಲಯಕ್ಕೆ ಸಲ್ಲಿಸಲು ಸೂಚಿಸಲಾಗಿದೆ.

E-mail - dte.dvp2@gmail.com

ಆದ್ದರಿಂದ, ಎಐಸಿಟಿಇಯ ಮಾನ್ಯತೆ ಪಡೆದ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಿಗೆ ರಾಜ್ಯ ಸರ್ಕಾರದ ಮಾನ್ಯತೆಯನ್ನು ಪಡೆಯಲು ಹಾಗೂ ಕೋರ್ಸುವಾರು ಪ್ರವೇಶಾತಿಯನ್ನು ನಿಗದಿಪಡಿಸಿ ಆದೇಶ ಹೊರಡಿಸುವಂತೆ ಕೋರಿ ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆಯನ್ನು ಕಳುಹಿಸಬೇಕಾಗಿರುತ್ತದೆ. ಆದ್ದರಿಂದ ನಿಮ್ಮ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಿಗೆ 2021-22ನೇ ಸಾಲಿಗೆ ಎಐಸಿಟಿಇಯ ಅನುಮೋದನೆ ಪಡೆದಿರುವ 05 ದೃಢೀಕೃತ ಪ್ರತಿಗಳನ್ನು (duly attested by the Principal) ಹಾಗೂ ಸಾಫ್ಟ್‌ಕಾಪಿಯನ್ನು ಕೂಡಲೇ ನಿರ್ದೇಶನಾಲಯಕ್ಕೆ ಕಳುಹಿಸಲು ಈ ಮೂಲಕ ಸೂಚಿಸಲಾಗಿದೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ,

1. ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ, ಖಾಸಗಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳ ಪ್ರಿನ್ಸಿಪಾಲರುಗಳಿಗೆ.
2. ಇಲಾಖೆಯ ಇ-ಗವರ್ನೆನ್ಸ್ ಸೆಲ್‌ಗೆ – ಸೂಕ್ತ ಕ್ರಮಕ್ಕಾಗಿ.